# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** M/s RBRK Investments Limited ಇವರಿಗೆ 19.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆ ಹಂಚಿಕೆ ಬಗ್ಗೆ.

**ಓದಲಾಗಿದೆ:**

1. ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರ ಪತ್ರ ಸಂಖ್ಯೆ: ಕೆಆರ್‌ಇಡಿ/08/ಆರ್‌ಬಿಆರ್‌ಕೆ–19.5 ಮೆ.ವ್ಯಾ./2010/3380 ದಿನಾಂಕ: 10.11.2010/13.12.2010.
2. ದಿನಾಂಕ: 25.01.2011ರಂದು ನಡೆದ ಹಂಚಿಕೆ ಸಮಿತಿ ಸಭೆಯ ನಡವಳಿಗಳು.

* * *

**ಪ್ರಸ್ತಾವನೆ :-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪತ್ರದಲ್ಲಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ವ್ಯವಸ್ಥಾಪಕ ನಿರ್ದೇಶಕರು M/s RBRK Investments Limited ಇವರಿಗೆ ಬಿಜಾಪುರ ಜಿಲ್ಲೆಯ, ಬಸವನಬಾಗೇವಾಡಿ ತಾಲ್ಲೂಕಿನ ಬಸವನಬಾಗೇವಾಡಿ, ಮಣ್ಣೂರು, ಜೈನಾಪುರ ಮತ್ತು ಉಪ್ಪನದಿಣ್ಣೆ ತಾಂಡ ಗ್ರಾಮಗಳ ಆಸುಪಾಸಿನಲ್ಲಿ 19.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವಂತೆ ಸರ್ಕಾರಕ್ಕೆ ಶಿಫಾರಸ್ಸು ಮಾಡಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಹಂಚಿಕೆ ಸಮಿತಿ ಸಭೆಯ ಮುಂದೆ ಸದರಿ ಪ್ರಸ್ತಾವನೆಯನ್ನು ಮಂಡಿಸಲಾಗಿತ್ತು. M/s RBRK Investments Limited ಇವರಿಗೆ 19.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲು ಹಂಚಿಕೆ ಸಮಿತಿಯು ಪರಿಗಣಿಸಿರುತ್ತದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ: –

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 492 ಎನ್‌ಸಿಇ 2010,**
**ಬೆಂಗಳೂರು, ದಿನಾಂಕ: 21.04.2011.**

M/s RBRK Investments Limited ಇವರಿಗೆ ಬಿಜಾಪುರ ಜಿಲ್ಲೆಯ, ಬಸವನಬಾಗೇವಾಡಿ ತಾಲ್ಲೂಕಿನ ಬಸವನಬಾಗೇವಾಡಿ, ಮಣ್ಣೂರು, ಜೈನಾಪುರ ಮತ್ತು ಉಪ್ಪನದಿಣ್ಣೆ ತಾಂಡ ಗ್ರಾಮಗಳ ಆಸುಪಾಸಿನಲ್ಲಿ 19.5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಗೆ ವಿವರಿಸಿರುವಂತೆ ಈ ಆದೇಶದಲ್ಲಿನ ನಿಬಂಧನೆಗೊಳಪಟ್ಟು ಹಂಚಿಕೆ ಮಾಡಿದೆ:-

| Topo sheet No. | Proposed capacity in MW | Near by villages of the proposed area and District. | Geographical area description of the project |
|---|---|---|---|
| 47 P/14 | 19.5 MW. (78 Nos. x 250 KW) | Basavanabagewadi, Mannur, Jainapura and Uppanadinni Tanda, Basavanabagewadi Taluka, Bijapur District | It is a plain area and has no significant orientation located on the SW of Basavanabagewadi & spread around Mannur, Jainapura and Uppanadinni Tanda villages. It appears to be a agriculture land and part of the area has presence of gravel waste and power lines. The areas has gentle elevation varying from 580 to 600m. The area is held in the following Geographical Co-ordinates:<br>Latitude: 16°30'21"- 16°33'58" N<br>Longitude: 75°55'12"- 75°58'15" E<br>Ridge peaks 629, 622, 623, 618, 594, 606 & 619m Amsl |

1. ಸದರಿ ಯೋಜನೆಯನ್ನು financial closure ಸಾಧಿಸಿದ 24 ತಿಂಗಳುಗಳ ಒಳಗಾಗಿ ಪ್ರಾರಂಭ ಮಾಡತಕ್ಕದ್ದು.

2. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳೊಳಗಾಗಿ ಯೋಜನಾಭಿವೃದ್ಧಿದಾರರು ರೂ.400ರ ಛಾಪಾ ಕಾಗದದಲ್ಲಿ ಸರ್ಕಾರದೊಂದಿಗೆ ಒಡಂಬಡಿಕೆಯನ್ನು ಮಾಡಿಕೊಳ್ಳುವುದು. ತಪ್ಪಿದಲ್ಲಿ ಈ ಹಂಚಿಕೆ ಆದೇಶ ತಂತಾನೆ ರದ್ದಾಗಿದೆ ಎಂದು ಭಾವಿಸುವುದು.

3. ಹಂಚಿಕೆದಾರರು ಪೂರ್ತಿ ಒಂದು ಪವನ ವರ್ಷಕ್ಕೆ ಕಡಿಮೆ ಇಲ್ಲದಂತೆ 10 ಮೀಟರ್ ಮತ್ತು ಹಬ್ ಹೈಟ್ ಮಟ್ಟದಲ್ಲಿ ಪವನ ವೇಗದ ಅಳತೆಯನ್ನು ಮಾಡಿಕೊಳ್ಳಬೇಕು. ಅಲ್ಲದೇ, ಕಾಲ ಕಾಲಕ್ಕೆ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದಿಂದ ಹೊರಡಿಸತಕ್ಕ ಮಾರ್ಗಸೂಚಿಗಳಿಗನುಗುಣವಾಗಿ ಮೈಕ್ರೊ ಸೈಟಿಂಗ್ ಮಾಡಿರುವ ಅಂಶಗಳನ್ನೊಳಗೊಂಡ ವಿವರವಾದ ಯೋಜನಾ ವರದಿಗಳ 3 ಪ್ರತಿಗಳನ್ನು ತಯಾರಿಸಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಮಂಡಿಸಬೇಕು. ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮ್‌ನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.

4. ಗಾಳಿ ಚಕ್ರದ ಹಬ್ ಹೈಟನಲ್ಲಿ ಪವನ ವೇಗದ ಅಳತೆ ಖಾತರಿ ಪಡಿಸಲು ಕೆಳಗಿನ ಕೋಷ್ಟಕದಲ್ಲಿ ವಿವರಿಸಿರುವಂತೆ ಪ್ರತಿ 5 ಮೆಗಾ ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ಒಂದರಂತೆ ಗಾಳಿ ಕಂಬವನ್ನು (ವಿಂಡ್ ಮಾಸ್ಟ್) ಅಳವಡಿಸಬೇಕು. ಅಳತೆ ವಿವರಗಳನ್ನು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸುವುದು.

| ಗಾಳಿ ಶಕ್ತಿ ವಿದ್ಯುತ್ತಿನ ದರ ಸಾಮರ್ಥ್ಯ | 5 ಮೆಗಾವ್ಯಾಟ್ ಗಾಳಿ ಯೋಜನೆಯಲ್ಲಿ ಸಾಧಾರಣ ಗಾಳಿ ಶಕ್ತಿ ವಿದ್ಯುತ್ತಿನ ಸಂಖ್ಯೆ | ಹಾಕಬೇಕಾಗಿರುವ ಗಾಳಿ ಕಂಬ (ವಿಂಡ್ ಮಾಸ್ಟ್‌ಗಳ ಸಂಖ್ಯೆ |
|---|---|---|
| > 200 ಕಿ.ವ್ಯಾ. ನಿಂದ 300 ಕಿ.ವ್ಯಾ | 18 | 1 |
| > 300 ಕಿ.ವ್ಯಾ. ನಿಂದ 500 ಕಿ.ವ್ಯಾ | 15 | 1 |
| > 500 ಕಿ.ವ್ಯಾ. ನಿಂದ 750 ಕಿ.ವ್ಯಾ | 12 | 1 |
| > 750 ಕಿ.ವ್ಯಾ. ನಿಂದ 1000 ಕಿ.ವ್ಯಾ | 8 ರಿಂದ 10 | 1 |

5. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲಿಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.

6. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ/ಕಂದಾಯ/ವಾಣಿಜ್ಯ & ಕೈಗಾರಿಕೆ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು.

7. ಅಭಿವೃದ್ಧಿದಾರರು ಸಂಬಂಧಿಸಿದ ವಿದ್ಯುತ್ ಸರಬರಾಜು ಕಂಪನಿಯೊಂದಿಗೆ/ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದೊಂದಿಗೆ ನೀತಿ ನಿಯಮಗಳಿಗನುಗುಣವಾಗಿ ವಿದ್ಯುತ್ ಖರೀದಿ ಒಡಂಬಡಿಕೆ/ವೀಲಿಂಗ್ ಮತ್ತು ಬ್ಯಾಂಕಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಲಾಗಿದೆ.

8. ಕಾಲ ಕಾಲಕ್ಕೆ ಇರುವ ನೀತಿ ನಿಯಮಗಳಿಗೆ ಅನುಗುಣವಾಗಿ ಯಂತ್ರೋಪಕರಣಗಳಿಗೆ ಪ್ರವೇಶ ತೆರಿಗೆಯಿಂದ ವಿನಾಯಿತಿ ನೀಡಲಾಗಿದೆ.

9. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.

10. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.

11. ಸದರಿ ಆದೇಶವನ್ನು ರದ್ದು ಪಡಿಸುವುದು/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಸುರೇಶ್.ಬಿ.ಕೃಷ್ಣಪ್ಪನವರ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ,
☎ 22034674.

**ಇವರಿಗೆ:**
ಸಂಕಲನಕಾರರು, ರಾಜ್ಯಪತ್ರ, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಪ್ರಕಟಣೆಗಾಗಿ.

**ಪ್ರತಿ :**

1 ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳು, ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ ಮತ್ತು ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು-1.
2 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ, ಬೆಂಗಳೂರು-9.
3 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ನಂ. 39, 'ಶಾಂತಿಗೃಹ', ಭಾರತ್ ಸ್ಕೌಟ್ಸ್ & ಗೈಡ್ಸ್ ಬಿಲ್ಡಿಂಗ್, ಅರಮನೆರಸ್ತೆ, ಮಹಾರಾಣಿ ಕಾಲೇಜಿನ ಹಿಂಭಾಗ, ಬೆಂಗಳೂರು-1.
4 ಜಿಲ್ಲಾಧಿಕಾರಿಗಳು, ಬಿಜಾಪುರ ಜಿಲ್ಲೆ, ಬಿಜಾಪುರ.
5 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
6 ಸರ್ಕಾರ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
7 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
8 M/s RBRK Investments Limited, 06-200/2/1, Plot No. 98P & 100P, Boudha Nagar, Jeedimetla village, Ranga Reddy District, Hyderabad – 500 055.
9 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.